## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಜ್ಯದಲ್ಲಿ 2019-20ನೇ ಸಾಲಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಹಾಗೂ ಅನುಷ್ಠಾನ ಸಂಬಂಧ ಕ್ಲಸ್ಟರ್‌ವಾರು ವಿಮಾ ಸಂಸ್ಥೆಗಳನ್ನು ನಿಗಧಿಪಡಿಸಿರುವುದರ ಸಂಬಂಧ ಘಟನೋತ್ತರ ಅನುಮೋದನೆ ನೀಡುವ ಬಗ್ಗೆ.

**ಓದಲಾಗಿದೆ:**
1. ಕೇಂದ್ರ ಸರ್ಕಾರದ ಪತ್ರ ಸಂಖ್ಯೆ: 13015 /03/2016 - Credit - II ದಿನಾಂಕ:25-04-2018
2. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ರವರ ಅಧ್ಯಕ್ಷತೆಯಲ್ಲಿ ದಿನಾಂಕ 13-02-2019 ರಂದು ನಡೆದ ರಾಜ್ಯಮಟ್ಟದ ಬೆಳೆವಿಮೆ ಸಮನ್ವಯ ಸಮಿತಿ (State Level Co-ordination Committee on Crop Insurance) ಸಭೆ ನಡವಳಿಗಳು.
3. ಕೃಷಿ ಆಯುಕ್ತಾಲಯದ ಕಾಯಾದೇಶಗಳು ದಿ:12.04.2019.
4. ಕೃಷಿ ಆಯುಕ್ತಾಲಯದ ಏಕ ಕಡತ ಸಂಖ್ಯೆ: ಜಕೃನಿ(ಬೆವಿ)/PMFBY/Bid/2019-20/1

*****

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ-1 ರಲ್ಲಿ ಓದಲಾದ ಪತ್ರದಲ್ಲಿ ಕೇಂದ್ರ ಸರ್ಕಾರವು 2019-20ನೇ ಸಾಲಿನಲ್ಲಿ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಅನುಷ್ಠಾನಗೊಳಿಸಲು ಆಡಳಿತಾತ್ಮಕ ಅನುಮೋದನೆಯನ್ನು ನೀಡಿರುತ್ತದೆ. ರಾಜ್ಯ ಸರ್ಕಾರವು ಆಯವ್ಯಯ ಲೆಕ್ಕ ಶೀರ್ಷಿಕೆ 2401-00-110-0-07 ರಡಿ ರೂ. 845.00 ಕೋಟಿ ಅನುದಾನವನ್ನು ರಾಜ್ಯದ ಪಾಲಿನ ಅನುದಾನವನ್ನಾಗಿ ನಿಗದಿಪಡಿಸಿರುತ್ತದೆ. ಸದರಿ ಅನುದಾನದಿಂದ 2019-20ನೇ ಸಾಲಿನಲ್ಲಿ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್‌ಯೋಜನೆಯನ್ನು ಮತ್ತು ಪುನರ್ ರಚಿತ ಹವಾಮಾನ ಆಧಾರಿತ ಬೆಳೆ ವಿಮಾ ಯೋಜನೆಯನ್ನು ಅನುಷ್ಠಾನಗೊಳಿಸಬೇಕಾಗಿರುತ್ತದೆ.

ಕರ್ನಾಟಕ ರಾಜ್ಯವು ಬೆಳೆವಿಮೆ ಯೋಜನೆಗಳನ್ನು ಸಂರಕ್ಷಣೆ ಪೋರ್ಟಲ್ ಮೂಲಕ ಪಾರದರ್ಶಕ ರೀತಿಯಲ್ಲಿ ಅನುಷ್ಠಾನಗೊಳಿಸಲಾಗುತ್ತಿದೆ. ಕೃಷಿ ಮತ್ತು ತೋಟಗಾರಿಕೆ ಇಲಾಖೆಗಳು ಬೆಳೆವಿಮೆ ಯೋಜನೆಗಳನ್ನು ಅನುಷ್ಠಾನಗೊಳಿಸಲು ನೋಡಲ್ ಇಲಾಖೆಗಳಾಗಿದ್ದು ಇವುಗಳ ಜೊತೆ ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ, ಜಿಲ್ಲಾಡಳಿತ, ರಾಜ್ಯ ಮಟ್ಟದ ಬ್ಯಾಂಕರ್ಸ್ ಸಮಿತಿ ಮತ್ತು ಜಿಲ್ಲಾ ಸಹಕಾರ ಬ್ಯಾಂಕ್‌ಗಳು ಹಾಗೂ ಅಪೆಕ್ಸ್ ಬ್ಯಾಂಕ್‌ಗಳ ಜೊತೆ ವಿವಿಧ ರಾಷ್ಟ್ರೀಯ ಬ್ಯಾಂಕ್‌ಗಳು ಸಮನ್ವಯದೊಂದಿಗೆ ಅನುಷ್ಠಾನಗೊಳಿಸಲಾಗುತ್ತಿದೆ.

ಮೇಲೆ ಕ್ರಮಸಂಖ್ಯೆ:2 ರಲ್ಲಿ ಓದಲಾದ ಸಮಿತಿ ಸಭೆಯಲ್ಲಿ ಬಿಡ್ ಡಾಕ್ಯುಮೆಂಟ್ ಅನ್ನು ಅನುಮೋದಿಸಲಾಗಿರುತ್ತದೆ. ಅದರನ್ವಯ ಒಟ್ಟು 25 ಆಹಾರ ಮತ್ತು ಎಣ್ಣೆ ಕಾಳು ಬೆಳೆಗಳನ್ನು ಹಾಗೂ 11 ವಾರ್ಷಿಕ ವಾಣಿಜ್ಯ ಬೆಳೆಗಳನ್ನು ಮುಂಗಾರು 2019 ರಲ್ಲಿ ರಾಜ್ಯದ ಎಲ್ಲಾ 30 ಜಿಲ್ಲೆಗಳಲ್ಲಿ PMFBY(ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ) ಯೋಜನೆಯಡಿ, ಅದೇ ರೀತಿ ಹಿಂಗಾರು

ಮತ್ತು ಬೇಸಿಗೆ ಹಂಗಾಮಿನಲ್ಲಿ ಒಟ್ಟು 22 ಆಹಾರ ಮತ್ತು 6 ಎಣ್ಣೆ ಕಾಳು ಬೆಳೆಗಳನ್ನು ರಾಜ್ಯದ 02 ಜಿಲ್ಲೆಗಳನ್ನು (ಬೆಂಗಳೂರು (ನಗರ) ಮತ್ತು ಬೆಂಗಳೂರು (ಗ್ರಾ)) ಹೊರತುಪಡಿಸಿ ಇನ್ನುಳಿದ 28 ಜಿಲ್ಲೆಗಳಲ್ಲಿ PMFBY (ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆ) ಯೋಜನೆಯಡಿ ಅನುಷ್ಠಾನಗೊಳಿಸಲು ತೀರ್ಮಾನಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ:3 ರಲ್ಲಿ ಓದಲಾದ ದಿ:12.04.2019 ರ ಕೃಷಿ ಆಯುಕ್ತಾಲಯದ ಕಾರ್ಯಾದೇಶದಲ್ಲಿ 2019-20ನೇ ಸಾಲಿನಲ್ಲಿ ಕ್ಲಸ್ಟರ್‌ವಾರು ಜಿಲ್ಲೆಗಳಲ್ಲಿ ಕಡಿಮೆ Weighted Premium rates ಅನ್ನು ನಮೂದಿಸಿರುವ ವಿಮೆ ಸಂಸ್ಥೆಗಳಿಗೆ ಬೆಳೆ ವಿಮೆ ಕಾರ್ಯ ಹಂಚಿಕೆ ಮಾಡಿ ಆದೇಶ ಹೊರಡಿಸಲಾಗಿರುತ್ತದೆ.

ಮೇಲೆ ಕ್ರಮ ಸಂಖ್ಯೆ:4 ರಲ್ಲಿ ಓದಲಾದ ಏಕ ಕಡತದಲ್ಲಿ ಕೃಷಿ ಆಯುಕ್ತರು, ರಾಜ್ಯದಲ್ಲಿ ಚುನಾವಣಾ ನೀತಿ ಸಂಹಿತೆಯು ಜಾರಿಯಲ್ಲಿದ್ದುದರಿಂದ 2019-20 ನೇ ಸಾಲಿನಲ್ಲಿ ಕರ್ನಾಟಕ ರೈತ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು ಜಾರಿಗೊಳಿಸಲು ಸಚಿವ ಸಂಪುಟದ ಅನುಮೋದನೆಯನ್ನು ಸಕಾಲದಲ್ಲಿ ಪಡೆಯಲು ಅವಕಾಶವಿಲ್ಲದೇ ಇದ್ದುದರಿಂದ ಹಾಗೂ ಸದರಿ ಯೋಜನೆಯನ್ನು ಅತ್ಯವಶ್ಯಕವಾಗಿ ಮತ್ತು ಸಮಯಾಧಾರಿತವಾಗಿ ಜಾರಿಗೊಳಿಸಬೇಕಾಗಿದ್ದುದರಿಂದ ಮಾನ್ಯ ಮುಖ್ಯ ಮಂತ್ರಿಯವರ ಅನುಮೋದನೆಯನ್ನು ಪಡೆದು ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ಕ್ಲಸ್ಟರ್‌ವಾರು ಮತ್ತು ವಿಮಾಸಂಸ್ಥೆವಾರು ಸ್ವೀಕೃತವಾಗಿದ್ದ ಅತಿ ಕಡಿಮೆ ಪ್ರೀಮಿಯಂ ದರಗಳನ್ವಯ ದಿ:12.04.2019 ರಂದು ಹೊರಡಿಸಿರುವ ವಿಮಾ ಸಂಸ್ಥೆವಾರು ಬೆಳೆ ವಿಮೆ ಕಾರ್ಯ ಹಂಚಿಕೆ ಕುರಿತ ಆದೇಶಕ್ಕೆ ಘಟನೋತ್ತರ ಅನುಮೋದನೆ ಹಾಗೂ 2019-20ನೇ ಸಾಲಿನಲ್ಲಿ ಬೆಳೆ ವಿಮೆ ಯೋಜನೆ ಅನುಷ್ಠಾನಗೊಳಿಸಲು ಅನುಮೋದನೆ ನೀಡುವಂತೆ ಕೋರಿರುತ್ತಾರೆ.

ಸರ್ಕಾರವು ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ದಿ:28.06.2019 ರಂದು ಸಚಿವ ಸಂಪುಟದ ಅನುಮೋದನೆಯನ್ನು ಪಡೆದು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 31 ಕೃಕೈಲು 2019, ಬೆಂಗಳೂರು, ದಿನಾಂಕ:04 07-2019**

2019-20ನೇ ಸಾಲಿನ ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯಡಿ ರಚಿಸಲಾಗಿರುವ 10 ಕ್ಲಸ್ಟರ್‌ಗಳಲ್ಲಿ, ಕ್ಲಸ್ಟರ್ ವಾರು, ವಿಮಾ ಸಂಸ್ಥೆವಾರು ಸ್ವೀಕೃತವಾದ ಅತಿ ಕಡಿಮೆ ವೈಟೆಡ್ ಪ್ರೀಮಿಯಂ ದರಗಳನ್ನು ನಮೂದಿಸಿರುವ ವಿಮಾ ಸಂಸ್ಥೆಗಳಿಗೆ ಕೆಳಕಂಡಂತೆ ಬೆಳೆ ವಿಮೆ ಕಾರ್ಯ ಹಂಚಿಕೆ ಮಾಡಿರುವ ಬಗ್ಗೆ ಕೃಷಿ ಆಯುಕ್ತಾಲಯದಿಂದ ಹೊರಡಿಸಲಾಗಿರುವ ಕಾರ್ಯಾದೇಶದ ಕ್ರಮಕ್ಕೆ ಘಟನೋತ್ತರ ಅನುಮೋದನೆ ನೀಡಿ ಆದೇಶಿಸಿದೆ.

| ಕ್ರ,ಸಂ | ಕ್ಲಸ್ಟರ್ ಸಂಖ್ಯೆ ಮತ್ತು ಜಿಲ್ಲೆಯ ಹೆಸರು | ವಿಮಾ ಸಂಸ್ಥೆಯ ಹೆಸರು | ಶೇಕಡವಾರು ಪ್ರೀಮಿಯಂ ದರ |
|---|---|---|---|
| 1 | **1- ಬಳ್ಳಾರಿ, ಉತ್ತರ ಕನ್ನಡ, ಚಿಕ್ಕಮಗಳೂರು** | **Bharthi Axa** | **6.77** |
| 2 | **2- ಬೆಂಗಳೂರು ಗ್ರಾಮೀಣ, ಚಿಕ್ಕಬಳ್ಳಾಪುರ, ಗದಗ** | **Bajaj** | **16.11** |
| 3 | **3- ಹಾವೇರಿ, ಕೋಲಾರ, ಕೊಪ್ಪಳ,** | **AIC** | **18.99** |

| | | | |
|---|---|---|---|
| 4 | 4– ಮಂಡ್ಯ, ವಿಜಯಪುರ, ಶಿವಮೊಗ್ಗ, | AIC | 16.27 |
| 5 | 5– ಕಲಬುರಗಿ, ಬಾಗಲಕೋಟೆ, ರಾಮನಗರ | Future General | 11.8 |
| 6 | 6– ಯಾದಗಿರಿ, ಬೆಳಗಾವಿ, ಚಾಮರಾಜನಗರ | Future General | 10.39 |
| 7 | 7– ಚಿತ್ರದುರ್ಗ, ಉಡುಪಿ, ಹಾಸನ | USGIC | 17.68 |
| 8 | 8– ಮೈಸೂರು, ಕೊಡಗು, ಧಾರವಾಡ | Bharthi Axa | 9.99 |
| 9 | 9– ದಾವಣಗೆರೆ, ದಕ್ಷಿಣ ಕನ್ನಡ, ಬೀದರ್, | HDFC | 12.42 |
| 10 | 10– ಬೆಂಗಳೂರು ನಗರ, ತುಮಕೂರು, ರಾಯಚೂರು | Future General | 14.14 |

ಮುಂದುವರೆದು, ಕರ್ನಾಟಕ ರೈತ ಸುರಕ್ಷಾ ಪ್ರಧಾನ ಮಂತ್ರಿ ಫಸಲ್ ಬಿಮಾ ಯೋಜನೆಯನ್ನು 2019–20ನೇ ಸಾಲಿನಲ್ಲಿ ಅನುಷ್ಠಾನಗೊಳಿಸಲು ಹಾಗೂ ಪ್ರಸಕ್ತ ಸಾಲಿನ ಲೆಕ್ಕ ಶೀರ್ಷಿಕೆ 2401–00–110–0–07 ಅಡಿಯಲ್ಲಿ ಒದಗಿಸಲಾದ ಅನುದಾನದಲ್ಲಿ ಕೇಂದ್ರ ಸರ್ಕಾರದ ಮಾರ್ಗಸೂಚಿಯನ್ವಯ ರಾಜ್ಯದ ಪಾಲಿನ ವೆಚ್ಚವನ್ನು ಭರಿಸಲು ಅನುಮೋದನೆ ನೀಡಿ ಆದೇಶಿಸಿದೆ.

**ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ**
**ಮತ್ತು ಅವರ ಹೆಸರಿನಲ್ಲಿ**

B S Nagarathnam

(ಬಿ.ಎಸ್.ನಾಗರತ್ನಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ (ಯೋಜನೆ).

4/7

ಇವರಿಗೆ:–

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), (ಇ & ಆರ್ ಎಸ್ ಎ), (ಎ & ಇ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿರವರು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನಸೌಧ.
4. ಪ್ರಧಾನ ಕಾರ್ಯದರ್ಶಿಗಳು, ತೋಟಗಾರಿಕೆ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ರಾಜ್ಯದ ಬೆಳೆ ವಿಮಾ ಸಮಿತಿಯ ಎಲ್ಲಾ ಸದಸ್ಯರಿಗೆ.(ಕೃಷಿ ಆಯುಕ್ತರ ಮುಖಾಂತರ)
6. ನಿರ್ದೇಶಕರು ತೋಟಗಾರಿಕೆ ಇಲಾಖೆ, ಬೆಂಗಳೂರು
7. ಕೃಷಿ ಆಯುಕ್ತರು, ಬೆಂಗಳೂರು.
8. ಕೃಷಿ ನಿರ್ದೇಶಕರು, ಬೆಂಗಳೂರು.
9. ನಿರ್ದೇಶಕರು, ಆರ್ಥಿಕ ಮತ್ತು ಸಾಂಖ್ಯಿಕ ನಿರ್ದೇಶನಾಲಯ, ಬೆಂಗಳೂರು.
10. ನಿರ್ದೇಶಕರು (ಪಿಎಫ್‌ಡಿ), ಯೋಜನಾ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
11. ಎಲ್ಲಾ ಜಿಲ್ಲಾಧಿಕಾರಿಗಳು.
12. ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಜಿಲ್ಲಾ ಪಂಚಾಯತ್.
13. ಎಲ್ಲಾ ಜಿಲ್ಲಾ ಜಂಟಿ ಕೃಷಿ ನಿರ್ದೇಶಕರು
14. ಎಲ್ಲಾ ಜಿಲ್ಲಾ ಉಪ ತೋಟಗಾರಿಕಾ ನಿರ್ದೇಶಕರು

15. ಎಲ್ಲಾ ಜಿಲ್ಲಾ ಸಂಖ್ಯಾ ಸಂಗ್ರಹಣಾಧಿಕಾರಿಗಳು.
16. ಎಲ್ಲಾ ಲೀಡ್ ಬ್ಯಾಂಕುಗಳು.
17. ಎಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳು.
18. ಎಲ್ಲಾ ಪ್ರಾದೇಶಿಕ ಗ್ರಾಮೀಣ ಬ್ಯಾಂಕುಗಳು.
19. ಎಲ್ಲಾ ನೋಡಲ್ ಬ್ಯಾಂಕುಗಳು.
20. ಪ್ರಾದೇಶಿಕ ವ್ಯವಸ್ಥಾಪಕರು, ಅಗ್ರಿಕಲ್ಚರ್ ಇನ್ಶೂರೆನ್ಸ್ ಕಂಪನಿ ಆಫ್ ಇಂಡಿಯಾ ಲಿಮಿಟೆಡ್, ಕರ್ನಾಟಕ ಪ್ರಾದೇಶಿಕ ಕಛೇರಿ, ಕರ್ನಾಟಕ ಪ್ರದೇಶ ಕೃಷಿಕ ಸಮಾಜ, ನಂ.18, 3ನೇ ಮಹಡಿ, ನೃಪತುಂಗ ರಸ್ತೆ, ಹಡ್ಸನ್ ವೃತ್ತ, ಬೆಂಗಳೂರು.
21. ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ –4), ಬೆಂಗಳೂರು.
22. ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ, ಬೆಂಗಳೂರು.
23. ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಮತ್ತು ತೋಟಗಾರಿಕೆ ಇಲಾಖೆ, ಬೆಂಗಳೂರು.
24. ರಕ್ಷಾ ಕಡತ : ಹೆಚ್ಚುವರಿ ಪ್ರತಿ.

(ಕ್ರಮ ಸಂಖ್ಯೆ: 5 ಮತ್ತು 11 ರಿಂದ 13 ರವರೆಗೆ ಕೃಷಿ ನಿರ್ದೇಶಕರ ಮೂಲಕ
ಕ್ರಮ ಸಂಖ್ಯೆ: 14, ನಿರ್ದೇಶಕರು ತೋಟಗಾರಿಕೆ ಇಲಾಖೆರವರ ಮೂಲಕ ಹಾಗೂ
ಕ್ರಮ ಸಂಖ್ಯೆ: 15–19 ರವರೆಗೆ ವಿಮಾ ಸಂಸ್ಥೆಯ ಮೂಲಕ)

**ಪ್ರತಿಯನ್ನು ಮಾಹಿತಿಗಾಗಿ:**

1. ಮಾನ್ಯ ಮುಖ್ಯಮಂತ್ರಿರವರ ಪ್ರಧಾನ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು
2. ಮಾನ್ಯ ಕೃಷಿ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
3. ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಸಚಿವ ಸಂಪುಟ ಶಾಖೆ, ವಿಧಾನ ಸೌಧ, ಬೆಂಗಳೂರು. ( ಪ್ರಕರಣ ಸಂಖ್ಯೆ:365/2019)
4. ಸರ್ಕಾರದ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಕೃಷಿ ಇಲಾಖೆ.